(ಇಂದು ದಿನಾಂಕಃ 05-04-2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು)

**ಮುಖ್ಯ ವಿಚಾರಣೆಃ ಶ್ರೀ ವಿ.ಎಸ.ಡಿ ವಕೀಲರಿಂದ ಪ್ರತಿವಾದಿಯ ಪರಃ**

1. ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಂತಹ ವಿಷಯಗಳು ಸರಿಯಾಗಿರುತ್ತವೆ. ಅದನ್ನು ನಾನೇ ಹೇಳಿ ಬರೆಸಿದ್ದೇನೆ.

2. ಈಗಾಗಲೇ ಗುರುತಿಸಿರುವ ನಿ.ಡಿ-1 ರಲ್ಲಿ ಸಾಕ್ಷಿಯ ಸಹಿಯನ್ನು ನಿ.ಡಿ-1 (ಸಿ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ವಾದಿ ಪರ ಶ್ರೀ. ಬಿ.ಎಸ ವಕೀಲರಿಂದ :**

1. ನಾನು ಬಾಬಯ್ಯ ಮತ್ತು ಬಾಗಮ್ಮ ಒಂದೇ ಊರಿನವರು ಎಂದರೆ ಸರಿ. ಇವತ್ತು ಬಾಬಯ್ಯ ನ್ಯಾಯಾಲಯಕ್ಕೆ ಬಂದಿರುತ್ತಾರೆ ಎಂದರೆ ಸರಿ. ನಿ.ಡಿ-1 ರಲ್ಲಿ ಸಾಯಿನಾಥ ಸಹಿ ಮಾಡಿಲ್ಲ ಎಂದರೆ ಸರಿ. ಆದ್ದರಿಂದ ಸಾಯಿನಾಥರವರಿಗೆ ಸದರಿ ಖರೀದಿ ಪತ್ರ ಸಂಬಂಧ ಇಲ್ಲ ಎಂದರೆ ಸರಿ. ನಾನು ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇರುವುದಿಲ್ಲಃ**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು.)**

ಓ.ಹೇ.ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು,
ಮತ್ತು ಜೆ.ಎಮ್. ಎಫ್. ಸಿ, ಚಿಂಚೋಳಿ.